G.O. of Govt. of Karnataka. Regarding Extension of list of G.O. identified jobs in all Boards, Corporat. and aided English 71

# ಕರ್ನಾಟಕ ಸರ್ಕಾರ

ಸಂಖ್ಯೆ:ಸಿಆಸುಇ 235 ಸೇನೆನಿ 2012 ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 27.11.2012

## ಸುತ್ತೋಲೆ

ವಿಷಯ: ರಾಜ್ಯ ಸರ್ಕಾರದ ಎಲ್ಲಾ ಸಂಸ್ಥೆಗಳು, ಉದ್ದಿಮೆಗಳು, ನಿಗಮಗಳು, ಮಂಡಳಿಗಳು ಸರ್ಕಾರದಿಂದ ಅನುದಾನಿತ ಖಾಸಗಿ ಸಂಸ್ಥೆಗಳು ಇವುಗಳಲ್ಲಿ ನೇಮಕಾತಿಯಲ್ಲಿ ಅಂಗವಿಕಲರಿಗೆ ಮೀಸಲಾತಿ ಒದಗಿಸುವ ಬಗ್ಗೆ.

ಉಲ್ಲೇಖ: 1)ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 97 ಸೇನೆನಿ 2002, ದಿನಾಂಕ 22.11.2002
2)ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 53 ಸೇನೆನಿ 2007, ದಿನಾಂಕ 4.1.2008

–0–

ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 9(1ಎ)ರಲ್ಲಿ, ಅಂಗವಿಕಲರಿಗೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಸಮೂಹ-ಎ ಮತ್ತು ಸಮೂಹ-ಬಿ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗಳಲ್ಲಿ ಶೇಕಡ 3ರಷ್ಟು ಮತ್ತು ಸಮೂಹ-ಸಿ ಮತ್ತು ಸಮೂಹ-ಡಿ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗಳಲ್ಲಿ ಶೇಕಡ 5ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ. ದಿನಾಂಕ 29.11.2002ರ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 52 ಎಸ್‌ಆರ್‌ಆರ್ 99ರಲ್ಲಿ ಅಂಗವಿಕಲರಿಗೆ ಕಲ್ಪಿಸಲಾಗಿರುವ ಮೀಸಲಾತಿಯನ್ನು ಜಾರಿಗೊಳಿಸಲು ಸಮೂಹ-ಸಿ ಮತ್ತು ಸಮೂಹ-ಡಿ ಹುದ್ದೆಗಳನ್ನು ಮತ್ತು ದಿನಾಂಕ 3.8.2009ರ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 21 ಎಸ್‌ಆರ್‌ಆರ್ 2008ರಲ್ಲಿ ಸಮೂಹ-ಎ ಮತ್ತು ಸಮೂಹ-ಬಿ ಹುದ್ದೆಗಳನ್ನು ಗುರುತಿಸಿ ಅಧಿಸೂಚಿಸಲಾಗಿರುತ್ತದೆ.

ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 22.11.2002ರ ಆದೇಶದಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಕಲ್ಪಿಸಿರುವ ಸಮತಳ ಮೀಸಲಾತಿಯೂ ಒಳಗೊಂಡಂತೆ ಇತರ ಸಮತಳ ಮೀಸಲಾತಿಗಳನ್ನು ಕಾರ್ಯಗತಗೊಳಿಸುವ ಉದ್ದೇಶಕ್ಕಾಗಿ ಸಾಮಾನ್ಯ ಅರ್ಹತೆ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರತಿ ಹಿಂದುಳಿದ ವರ್ಗಗಳಿಗೆ ಪ್ರತ್ಯೇಕವಾಗಿ ಲಭ್ಯವಾಗುವ 20 ರಿಕ್ತ ಸ್ಥಾನಗಳ ಸಮೂಹದಲ್ಲಿ ರೋಸ್ಟರ್ ಬಿಂದುಗಳನ್ನು ನಿಗದಿಪಡಿಸಲಾಗಿದೆ.

ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ 4.1.2008ರ ಆದೇಶದಲ್ಲಿ ಅಂಗವಿಕಲ ಅಭ್ಯರ್ಥಿಗಳಿಗೆ ನಿಗದಿಪಡಿಸಿದ್ದ ರೋಸ್ಟರ್‌ನ 19ನೇ ಬಿಂದುವಿಗೆ ಬದಲಾಗಿ, ರೋಸ್ಟರ್‌ನ 4ನೇ ಬಿಂದುವನ್ನು ನಿಗದಿಪಡಿಸಿ ಆದೇಶಿಸಲಾಗಿದೆ. ಇದೇ ರೋಸ್ಟರನ್ನು 20 ರಿಕ್ತ ಸ್ಥಾನಗಳ ಬದಲಾಗಿ 100 ರಿಕ್ತ ಸ್ಥಾನಗಳಿಗೆ ಅನ್ವಯಿಸಿದಲ್ಲಿ ಅಂಗವಿಕಲ ಅಭ್ಯರ್ಥಿಗಳಿಗೆ ಲಭ್ಯವಾಗುವ ರೋಸ್ಟರ್ ಬಿಂದುಗಳ ಸಂಖ್ಯೆಗಳು 4, 24, 44, 64 ಮತ್ತು 84 ಆಗುತ್ತವೆ. ಈ ರೋಸ್ಟರ್ ಬಿಂದುಗಳು ಸಮೂಹ-ಸಿ ಮತ್ತು ಸಮೂಹ-ಡಿಗೆ ಸೇರಿದ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗೆ ಅನ್ವಯವಾಗುತ್ತವೆ.

ದಿನಾಂಕ: 7.9.2012 ಮತ್ತು ದಿನಾಂಕ: 9.10.2012ರ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 179 ಎಸ್‌ಆರ್‌ಆರ್ 2012ರಲ್ಲಿ ಕೇಂದ್ರ ಸರ್ಕಾರವು ಗುಂಪು-ಎ ಮತ್ತು ಬಿ ಹಾಗೂ ಗುಂಪು-ಸಿ ಮತ್ತು ಡಿ ವೃಂದಗಳಲ್ಲಿ ಅಂಗವಿಕಲರಿಗೆ ಹುದ್ದೆಗಳನ್ನು ಗುರ್ತಿಸಿ ಹೊರಡಿಸಿರುವ ಅಧಿಸೂಚನೆಯನ್ನು ರಾಜ್ಯ ಸರ್ಕಾರವು ಅಳವಡಿಸಿಕೊಂಡಿದೆ.

ಅಂಗವಿಕಲ ವ್ಯಕ್ತಿಗಳ(ಸಮಾನ ಅವಕಾಶ, ಹಕ್ಕುಗಳ ಸಂರಕ್ಷಣೆ ಮತ್ತು ಪೂರ್ಣಭಾಗವಹಿಸುವಿಕೆ)ಅಧಿನಿಯಮ, 1995ರ ಸೆಕ್ಷನ್ 32 ಮತ್ತು 33ರನ್ವಯ ಅಂಗವಿಕಲರಿಗೆ ಮೀಸಲಾತಿ ಕಲ್ಪಿಸುವ ಮತ್ತು ಮೀಸಲಾತಿಯನ್ನು ಅನುಷ್ಠಾನಗೊಳಿಸಲು ಹುದ್ದೆಗಳನ್ನು ಗುರುತಿಸಿ ಅಧಿಸೂಚಿಸುವ ಆಸ್ಪದಗಳು ಸರ್ಕಾರದ ಇಲಾಖೆಗಳು ಒಳಗೊಂಡಂತೆ ಸಾರ್ವಜನಿಕ ವಲಯದ ಸಂಸ್ಥೆಗಳು ಅಂದರೆ ಸ್ಥಳೀಯ ಸಂಸ್ಥೆಗಳು, ಸ್ವಾಯತ್ತ ಸಂಸ್ಥೆಗಳು, ನಿಗಮಗಳು, ಮಂಡಳಿಗೆ ಮತ್ತು ಸರ್ಕಾರದಿಂದ ಅನುದಾನ ಪಡೆಯುವ ಸಂಸ್ಥೆಗಳಿಗೂ ಅನ್ವಯವಾಗುತ್ತವೆ. ಆದುದರಿಂದ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮಾಡುವ ನೇರನೇಮಕಾತಿಗಳಲ್ಲಿ ಅಂಗವಿಕಲರಿಗೆ ಕಲ್ಪಿಸಿರುವ ಮೀಸಲಾತಿಯನ್ನು ಸಾರ್ವಜನಿಕ ವಲಯದ ಸಂಸ್ಥೆಗಳು ಅಳವಡಿಸಿಕೊಂಡು ಅನುಷ್ಠಾನಗೊಳಿಸಬೇಕಾಗಿರುತ್ತದೆ.

ಆದುದರಿಂದ, ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು : ಕಾರ್ಯದರ್ಶಿಗಳು, ತಮ್ಮ ಆಡಳಿತ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ರಾಜ್ಯ ಸರ್ಕಾರದ ಎಲ್ಲಾ ಸಾರ್ವಜನಿಕ ವಲಯದ ಸಂಸ್ಥೆಗಳಿಗೆ ಅಂದರೆ ಸ್ಥಳೀಯ ಸಂಸ್ಥೆಗಳು, ಸ್ವಾಯತ್ತ ಸಂಸ್ಥೆಗಳು, ನಿಗಮಗಳು, ಮಂಡಳಿಗಳು ಮತ್ತು ಸರ್ಕಾರದಿಂದ ಅನುದಾನ ಪಡೆಯುವ ಖಾಸಗಿ ಸಂಸ್ಥೆಗಳಲ್ಲಿನ ಹುದ್ದೆಗಳಿಗೆ ಮಾಡುವ ನೇರನೇಮಕಾತಿಗಳಲ್ಲಿ ಅಂಗವಿಕಲರಿಗೆ ಕಲ್ಪಿಸಿರುವ ಮೀಸಲಾತಿಯನ್ನು ಅಳವಡಿಸಿಕೊಂಡು ಅನುಷ್ಠಾನಗೊಳಿಸುವಂತೆ ಸಂಬಂಧಿಸಿದ ಸಂಸ್ಥೆಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಈ ಮೂಲಕ ಸೂಚಿಸಲಾಗಿದೆ.

(ಎಸ್.ವಿ. ರಂಗನಾಥ್)
ಸರ್ಕಾರದ ಮುಖ್ಯ ಕಾರ್ಯದರ್ಶಿ

ಇವರಿಗೆ

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು-1-ಮುಂದಿನ ರಾಜ್ಯಪತ್ರದಲ್ಲಿ ತಪ್ಪದೇ ಪ್ರಕಟಿಸುವಂತೆ ಹಾಗೂ ಪ್ರಕಟಿತ ಸುತ್ತೋಲೆಯ 100 ಪ್ರತಿಗಳನ್ನು ಸಿಆಸುಇ (ಸೇವಾ ನಿಯಮಗಳು-ಎ) ಶಾಖೆಗೆ ಕಳುಹಿಸಿಕೊಡುವಂತೆ ಕೋರಲಾಗಿದೆ.

<u>ಪ್ರತಿ:</u>

1) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
2) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು-1
3) ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು
4) ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
5) ಎಲ್ಲಾ ಇಲಾಖಾ ಮುಖ್ಯಸ್ಥರುಗಳು
6) ಎಲ್ಲಾ ಸಚಿವರುಗಳ ಆಪ್ತ ಕಾರ್ಯದರ್ಶಿಯವರು
7) ಸರ್ಕಾರದ ಮುಖ್ಯ ಕಾರ್ಯದರ್ಶಿ / ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ
8) ಸರ್ಕಾರದ ಎಲ್ಲ ವಿಶೇಷ:ಅಪರ:ಜಂಟಿ:ಉಪ:ಅಧೀನ ಕಾರ್ಯದರ್ಶಿಗಳು
9) ಸಚಿವಾಲಯದ ಎಲ್ಲಾ ಶಾಖೆಗಳ ಶಾಖಾಧಿಕಾರಿಗಳು
10) *ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ಪರಿಷತ್ತು, ವಿಧಾನ ಸೌಧ.

11) *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು-1
12) *ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು-1
13) *ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಇಂದಿರಾನಗರ, ಬೆಂಗಳೂರು-38
14) *ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು-1

ವಾರದ ರಾಜ್ಯಪತ್ರ/ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು

(* ಮುಖ ಪತ್ರದೊಂದಿಗೆ)